# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 597 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಿಬ್ಬಂದಿಗಳಿಗೆ KGID, EGIS, DCRG ಇತ್ಯಾದಿ ಎಲ್ಲಾ ಸರ್ಕಾರಿ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ಈ ಸೌಲಭ್ಯಗಳನ್ನು ನೀಡದೆ ಇರಲು ಕಾರಣವೇನು; ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು? | ಅಲ್ಪಸಂಖ್ಯಾತರ ನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಿಬ್ಬಂದಿಗಳಿಗೆ ಕೆ.ಜಿ.ಐಡಿ, ಇ.ಜಿ.ಎಸ್, ಡಿ.ಸಿ.ಆರ್.ಜಿ ಸರ್ಕಾರಿ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಧ ಅಧೀನದಲ್ಲಿ ಪರಿಶಿಷ್ಟ ಜಾತಿ- 503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 6403 ಖಾಯಂ ಬೋಧಕ/ಬೋದಕೇತರ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>**ಕೆ.ಜಿ.ಐ.ಡಿ & ಇ.ಜಿ.ಐ.ಎಸ್:** |
| ಆ) | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಿಬ್ಬಂದಿಗಳಿಗೆ KGID, EGIS, DCRG ಇತ್ಯಾದಿ ಎಲ್ಲಾ ಸರ್ಕಾರಿ ಸೌಲಭ್ಯಗಳನ್ನು ನೀಡುವ ಚಿಂತನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ನೀಡಲಾಗುವುದು; (ವಿವರ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಸರ್ಕಾರಿ ಅಧೀನದ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿದ್ದು ಸದರಿ ಸಂಸ್ಥೆಯ ವಸತಿ ಶಾಲೆಯ ಸಿಬ್ಬಂದಿಗಳನ್ನು ಸಿ.ಸಿ.ಎ ನಿಯಮಗಳ ಕಾರ್ಯಸೂಚಿಯಲ್ಲಾಗಲೀ ಅಪೇಂಡಿಕ್ಸ್-ಬಿ ಕಾರ್ಯಸೂಚಿಯಲ್ಲಾಗಲೀ ಸೂಚಿಸಿರುವುದಿಲ್ಲ ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳ ಮಾಹಿತಿಯನ್ನು ವೇತನ ಮತ್ತು ಬೇಕಾಗುವ ಅನುದಾನದ ಬಗ್ಗೆ ಆರ್ಥಿಕ ಇಲಾಖೆಗೆ ನೀಡಲಾಗುತ್ತಿದ್ದು ಸಂಘವು ತನ್ನದೇ ಆದ ಸಂಪನ್ಮೂಲವನ್ನು ಹೊಂದಿರದೇ ವೇತನ ಬಾಬ್ತು ಸೇರಿದಂತೆ ವಸತಿ ಶಾಲೆಗಳ ಕಾರ್ಯಕ್ರಮಗಳ ಅನುಷ್ಠಾನಕ್ಕೆ ರಾಜ್ಯ ಸರ್ಕಾರದ ಅನುದಾನದಿಂದ ಅನುಷ್ಠಾನಗೊಳಿಸಲಾಗಿರುತ್ತದೆ. ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುವ ವಸತಿ ಶಿಕ್ಷಣ ಸಂಸ್ಥೆಗಳ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ಮತ್ತು ಇ.ಜಿ.ಐ.ಎಸ್ ವ್ಯಾಪ್ತಿಗ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆ ತಿಳಿಸಿರುತ್ತದೆ.<br><br>**ಡಿ.ಸಿ.ಆರ್.ಜಿ** : 6ನೇ ವೇತನ ಆಯೋಗದ |

| | | |
|---|---|---|
| ಇ) | ಒಂದೇ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ಸರ್ಕಾರವು ತಾರತಮ್ಯ ಮಾಡಿದಂತಾಗುವುದಿಲ್ಲವೇ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು? | ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ:23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ.<br><br>6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ:23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.<br><br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ. |

ಸಕಇ-ಎಂಡಿಎಸ್/219/2023

(ಡಾ||ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು